157 ಕ್ಕೆ 6 = (161)
LRR
140126

# ಕರ್ನಾಟಕ ವಿಧಾನ ಪರಿಷತ್ತು

## ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಎಂ.ಪಿ. ಕುಶಾಲಪ್ಪ(ಸುಜಾ), ಇವರ ನಿಯಮ 72ರ ಗಮನ ಸೆಳೆಯುವ ಸೂಚನೆಗೆ ಉತ್ತರ

**ಸೂಚನೆ:-**

ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಉಡುಪಿ ಜಿಲ್ಲಾ ಕಛೇರಿಯಲ್ಲಿ 27-11-2008 ರಿಂದ (ಕಳೆದ 16 ವರ್ಷಗಳಿಂದ) ಹೊರಗುತ್ತಿಗೆ ಆಧಾರದಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಶ್ರೀ ಪುರಾದರ (ವಿಕಲಚೇತನ) ಇವರನ್ನು ಏಕಾಏಕಿ ಕೆಲಸದಿಂದ ತೆಗೆದು ಹಾಕಿದ್ದು, ಸದರಿಯವರಿಗೆ ಬಾಕಿ ಇರುವ ಹಿಂದಿನ 7 ತಿಂಗಳ ವೇತನ ಪಾವತಿಯಾಗಿರುವುದಿಲ್ಲ. ಸದರಿ ಬಾಕಿ ವೇತನ ಪಾವತಿ ಮಾಡುವಂತೆ ಹಾಗೂ ವಿಕಲಚೇತನ ಆಗಿರುವ ಇವರನ್ನು ಕೂಡಲೇ ಹೊರಗುತ್ತಿಗೆ ಆಧಾರದ ಮೇಲೆ ಕೆಲಸದಲ್ಲಿ ಮುಂದುವರೆಸಿ, ಸಾಮಾಜಿಕ ನ್ಯಾಯ ಒದಗಿಸಿ, ಸದರಿಯವರ ಜೀವನ ನಿರ್ವಹಣೆಗೆ ಅನುಕೂಲ ಮಾಡಿಕೊಡುವ ಸಂಬಂಧ ಮಾನ್ಯ ಪರಿಶಿಷ್ಟ ಪಂಗಡಗಳ ಸಚಿವರ ಗಮನ ಸೆಳೆಯ ಬಯಸುತ್ತೇನೆ.

**ಉತ್ತರ:-**

ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಉಡುಪಿ ಜಿಲ್ಲಾ ಕಛೇರಿಯಲ್ಲಿ ದಿನಾಂಕ:27-11-2008 ರಿಂದ (ಕಳೆದ 16 ವರ್ಷಗಳಿಂದ) ಹೊರಗುತ್ತಿಗೆ ಆಧಾರದಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಶ್ರೀ ಪುರಾದರ ಇವರನ್ನು ದಿನಾಂಕ:11-2-2024 ರಂದು ನಡೆದ 63ನೇ ನಿರ್ದೇಶಕರ ಮಂಡಳಿಯ ಸಭೆಯ ನಿರ್ಣಯದಂತೆ ಹಾಗೂ ಆರ್ಥಿಕ ಇಲಾಖೆಯ ನಿರ್ದೇಶನದಂತೆ ನಿಗಮದಲ್ಲಿ ಹೊರಸಂಪನ್ಮೂಲದ ಆಧಾರದ ಮೇಲೆ 'ಸಿ' ಮತ್ತು 'ಡಿ' ವೃಂದದ ಹುದ್ದೆಗಳಲ್ಲಿ ಹೆಚ್ಚುವರಿಯಾಗಿ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳನ್ನು ದಿನಾಂಕ:31-8-2024 ರೊಳಗೆ ಏಜೆನ್ಸಿಗೆ ಹಿಂದಿರುಗಿಸಲು ನಿರ್ದೇಶಿಸಿರುತ್ತದೆ. ಅದರಂತೆ, ಉಡುಪಿ ಜಿಲ್ಲಾ ಕಛೇರಿಯಲ್ಲಿ ಹೊರ ಸಂಪನ್ಮೂಲ ಆಧಾರದ ಮೇಲೆ ಕರ್ತವ್ಯ ನಿರ್ವಹಿಸುತ್ತಿದ್ದ, ಶ್ರೀ ಪುರಾದರ ಇವರ ಸೇವೆಯನ್ನು ಏಜೆನ್ಸಿಗೆ ಹಿಂದಿರುಗಿಸಲಾಗಿರುತ್ತದೆ. ಸದರಿ ನೌಕರರಿಗೆ ದಿನಾಂಕ:31-8-2024 ರವರೆಗೆ ವೇತನವನ್ನು ಪಾವತಿಸಲಾಗಿರುತ್ತದೆ ಹಾಗೂ ಯಾವುದೇ ವೇತನ ಪಾವತಿ ಬಾಕಿ ಇರುವುದಿಲ್ಲ.

ಮುಂದುವರೆದು, ಸದರಿ ನೌಕರರನ್ನು ಮತ್ತೊಮ್ಮೆ ಹೊರಸಂಪನ್ಮೂಲ ಆಧಾರದ ಮೇಲೆ ನೇಮಿಸಿಕೊಳ್ಳಲು, ಪ್ರಸ್ತುತ ಉಡುಪಿ ಜಿಲ್ಲಾ ಕಛೇರಿಯಲ್ಲಿ ಖಾಲಿ ಹುದ್ದೆಗಳು ಲಭ್ಯವಿರುವುದಿಲ್ಲ. ಅವಶ್ಯಕತೆ ಇರುವ ಹೆಚ್ಚುವರಿ ಸಿಬ್ಬಂದಿಯನ್ನು ನೇಮಕಾತಿ ಮಾಡಿಕೊಳ್ಳಲು, ಆರ್ಥಿಕ ಇಲಾಖೆಗೆ ಪ್ರಸ್ತಾವನೆ ಸಲ್ಲಿಸಲಾಗಿರುತ್ತದೆ. ಆರ್ಥಿಕ ಇಲಾಖೆಯಿಂದ ಹೆಚ್ಚುವರಿ ಸಿಬ್ಬಂದಿಯನ್ನು ನೇಮಕ ಮಾಡಿಕೊಳ್ಳಲು ಮಂಜೂರಾತಿ ನೀಡಿದ್ದಲ್ಲಿ,ಸದರಿ ನೌಕರರ ಸೇವೆಯನ್ನು ಪಡೆಯಲು ನಿಯಮಾನುಸಾರ ಪರಿಶೀಲಿಸಲಾಗುವುದು.

**STW/SECA/STP/147/2025**

(ಸಿದ್ದರಾಮಯ್ಯ)
ಮುಖ್ಯಮಂತ್ರಿ